ಸೋಮವಾರಪೇಟೆಯಲ್ಲಿ 22 ಕೆವಿ ಸಬ್ ಸ್ಟೇಷನ್ ಸ್ಥಾಪಿಸುವುದು

628(734); ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಮಡಿಕೇರಿ)

ಅ) ಕೊಡಗು ಜಿಲ್ಲೆಯ ಸೋಮವಾರಪೇಟೆ ವಿದ್ಯುತ್ ಇಲಾಖೆಯಲ್ಲಿ 33 ಕೆ.ವಿ. ವಿದ್ಯುತ್ ಯೋಜನೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಯೋಜನೆಯನ್ನು 66 ಕೆ.ವಿ. ಅಥವಾ 100 ಕೆ.ವಿ.ಗೆ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ) **ಮತ್ತು ಆ)** ಕೊಡಗು ಜಿಲ್ಲೆಯ ಸೋಮವಾರಪೇಟೆಯಲ್ಲಿರುವ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು 66/11 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿತ್ತು. ಆದರೆ ಅಗತ್ಯವಿರುವ 66 ಕೆ.ವಿ. ಪ್ರಸರಣ ಮಾರ್ಗ ನಿರ್ಮಾಣಕ್ಕಾಗಿ ಅರಣ್ಯ ಇಲಾಖೆಯಿಂದ ಅನುಮತಿ ದೊರೆಯದ ಕಾರಣ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವತಿಯಿಂದ ಹಾಲಿ ಇರುವ 33 ಕೆ.ವಿ. ವಿದ್ಯುತ್ ಉಪ ಕೇಂದ್ರದಲ್ಲಿ ಹೆಚ್ಚುವರಿಯಾಗಿ ಒಂದು 5 ಎಂ.ವಿ.ಎ. ಟ್ರಾನ್ಸ್‌ಫಾರ್ಮರ್‌ನ್ನು ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಇದಲ್ಲದೆ ಸೋಮವಾರಪೇಟೆಯಿಂದ ಅಂದಾಜು 15 ಕಿ.ಮೀ. ದೂರದಲ್ಲಿರುವ ಆಲೂರು ಸಿದ್ದಾಪುರ ಗ್ರಾಮದಲ್ಲಿ ಹೊಸದಾಗಿ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರವು ಡಿಸೆಂಬರ್–2014 ರಲ್ಲಿ ಚಾಲನೆಗೊಂಡಿರುವುದರಿಂದ, ಪ್ರಸ್ತುತ ಸೋಮವಾರಪೇಟೆಯಲ್ಲಿ ಮತ್ತೊಂದು 66/11 ಕೆ.ವಿ. ವಿದ್ಯುತ್ ಉಪ ಕೇಂದ್ರದ ಅಗತ್ಯವಿರುವುದಿಲ್ಲ.